

ಅರುಣ ಪಿ. ಭಟ್ಟ

## ವಾರಭವಿಷ್ಯ: 12.02.2026ರಿಂದ 18.02.2026ರವರೆಗೆ




ವಾರದ ಶುರುವಿನಿಂದಲೇ ಉತ್ಸಾಹದಿಂದ ಕಾಣಿಸಿಕೊಳ್ಳುತ್ತೀರಿ. ನಿಮ್ಮ ವೈಯಕ್ತಿಕ ಶ್ರಮದಿಂದ ಹೆಚ್ಚಿನ ಯಶಸ್ಸು ಪಡೆಯಲು ಸಾಧ್ಯವಾಗುತ್ತದೆ. ಆ ಕಾರಣಕ್ಕಾಗಿ ಹಲವು ಕೆಲಸ ಕಾರ್ಯಗಳನ್ನು ಪೂರೈಸಲಾಗುತ್ತದೆ. ಇದರಿಂದ ನಿಮಗೆ ಸಂತುಷ್ಟವಾಗುತ್ತದೆ. ಇನ್ನು ನಿಮ್ಮ ಸಹೋದ್ಯೋಗಿಗಳ ಜತೆಗೆ ಇರುವ ಭಿನ್ನಾಭಿಪ್ರಾಯಗಳನ್ನು ಮರೆಯಲು ಪ್ರಯತ್ನ ಮಾಡುತ್ತೀರಿ. ಶುಭದಿನ: 13. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




ಶುಭ ಕಾರ್ಯವನ್ನು ಆಯೋಜಿಸುವ ಸಾಧ್ಯತೆ ಇದೆ. ಈ ವಾರದ ಮೊದಲಾರ್ಧದಲ್ಲಿ ಗ್ರಹಗತಿಗಳು ನಿಮಗೆ ಅನುಕೂಲಕರವಾಗಿವೆ. ಈ ಅವಧಿಯಲ್ಲಿ ಅತಿ ಮುಖ್ಯವಾದ ಕೆಲಸಗಳನ್ನು ಮಾಡಿಕೊಂಡು ಬಿಡಿ. ಯಾವುದೇ ಇಂಟರ್ ವ್ಯೂ, ವ್ಯವಹಾರದಲ್ಲಿ ಯಶಸ್ಸು ಕಾಣಬಹುದು. ಉದ್ಯೋಗ ಸ್ಥಳದಲ್ಲಿ ನಿಮ್ಮ ಗೌರವ, ವರ್ಚಸ್ಸು ಹೆಚ್ಚುವ ಸಾಧ್ಯತೆ ಇದೆ. ಶುಭದಿನ: 14. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.




ಆರೋಗ್ಯ ಸುಧಾರಿಸುವುದು. ಆಕಸ್ಮಿಕ ಖರ್ಚು ಸಂಭವ. ಆಸ್ತಿ ಖರೀದೀ ಬಗ್ಗೆ ಚಿಂತನೆ ಕಲಾವಿದರಿಗೆ, ಸಾಹಿತಿಗಳಿಗೆ ಉತ್ತಮ ಅವಕಾಶ. ಸಂಘ ಸಂಸ್ಥೆಗಳಿಂದ ಧನಲಾಭ. ಶತ್ರುಗಳು ಹಿಂದೆ ಸರಿಯುವರು. ವೃತ್ತಿ ವ್ಯವಹಾರದಲ್ಲಿ ಲಾಭ, ವ್ಯಾವಹಾರಿಕ ಅನುಕೂಲತೆ. ತಂದೆ ತಾಯಿಯವರ ಆರೋಗ್ಯ ಸುಧಾರಣೆ. ಸಾಮಾಜಿಕ ಮನ್ನಣೆ ದೊರೆಯುವುದು. ಶುಭದಿನ: 15. ಚಂಡಿ ಪಾರಾಯಣ ಮಾಡಿರಿ.




ನವೋಲ್ಲಾಸ ಬರುವುದು. ಧರ್ಮ ದಾನಕ್ಕಾಗಿ ಖರ್ಚು. ಮಿತ್ರರಿಗೆ ಸಹಾಯ. ವ್ಯಾಪಾರದಲ್ಲಿ ಅಧಿಕ ಲಾಭ ಹಳೆಯ ಮಿತ್ರರ ಆಗಮನ. ಹಲವು ದಿನಗಳ ಸಮಸ್ಯೆ ಬಗೆಹರಿಯುವುದು. ಹೊಟ್ಟೆನೋವಿನ ಕಾಟ. ಮನೆಯಲ್ಲಿ ಸಂಭ್ರಮ. ಮಕ್ಕಳಿಂದ ಶುಭವಾರ್ತೆ. ಮಹತ್ವದ ಕಾಗದ ಪತ್ರಗಳ ರಕ್ಷಣೆ. ಸಹೋದರರ ಸಹಾಯ. ಶುಭದಿನ: 14. ಶಿವ ಕವಚ ಓದಿರಿ.




ಕುಟುಂಬ ಸದಸ್ಯರ ಜತೆಗೆ ಹೆಚ್ಚಿನ ಸಮಯ ಕಳೆಯುವ ಸಾಧ್ಯತೆ ಇದೆ. ಇದೇ ವೇಳೆ ಕುಟುಂಬ ಸದಸ್ಯರಿಗೆ ಕೆಲವು ಕೆಲಸಗಳನ್ನು ವಹಿಸುತ್ತೀರಿ. ಅವುಗಳನ್ನು ತುಂಬ ಶ್ರದ್ಧೆಯಿಂದ ಅವರು ಮುಗಿಸುತ್ತಾರೆ. ಈ ವಾರ ಹೆಚ್ಚು ಚಟುವಟಿಕೆಯಿಂದ ನೀವು ಇರಬೇಕಾಗುತ್ತದೆ. ಭೂ ವ್ಯಾಜ್ಯವೊಂದಕ್ಕೆ ಶ್ರಮ ಹಾಕಲಿದ್ದೀರಿ. ಕಾನೂನಿನ ವಿಚಾರದಲ್ಲಿ ತೊಡಗಿಕೊಳ್ಳಬೇಕಾಗುತ್ತದೆ. ಶುಭದಿನ: 15. ಸೌಂದರ್ಯಲಹರಿ ಪಠಿಸಿರಿ.




ಎಂಜಿನಿಯರಿಗೆ ಹೆಚ್ಚಿನ ಅವಕಾಶಗಳು ಹುಡುಕಿಕೊಂಡು ಬರುತ್ತವೆ. ಪ್ರಮುಖ ವ್ಯಕ್ತಿಗಳ ಪರಿಚಯ ಆಗುತ್ತದೆ. ನಿಮ್ಮಲ್ಲಿ ಸಕಾರಾತ್ಮಕ ಪರಿಣಾಮ ಅನುಭವಕ್ಕೆ ಬರುತ್ತದೆ. ಸಂಗಾತಿ ಜತೆಗೆ ಇದನ್ನು ಹಂಚಿಕೊಳ್ಳುತ್ತೀರಿ. ಕುಟುಂಬದೊಳಗೆ ಸಂತಸದ ವಾತಾವರಣ ಇರುತ್ತದೆ. ಹಣದ ಮೂಲವನ್ನು ಸರಿಯಾದ ದಾರಿಯಲ್ಲಿ ವಿತರಿಸಲು ಯಶಸ್ಸು ಸಾಧಿಸುತ್ತೀರಿ. ಶುಭದಿನ: 12. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.




ಈ ವಾರ ವೈಯಕ್ತಿಕ ಲಾಭ ಹಾಗೂ ಮಹತ್ತರವಾದ ಪ್ರಗತಿ ಕಾಣುವ ಯೋಗ ಇದೆ. ಸಂದರ್ಶನಗಳಲ್ಲಿ ಭಾಗವಹಿಸುವವರು ಅನುಕೂಲಕರ ಫಲಿತಾಂಶ ನಿರೀಕ್ಷಿಸಬಹುದು. ಮನೆಗೆ ಎಲೆಕ್ಟ್ರಾನಿಕ್ ವಸ್ತುಗಳ ಖರೀದಿ ಮಾಡಲಿದ್ದೀರಿ. ಸೇವಾ ವಲಯದಲ್ಲಿ ಕಾರ್ಯ ನಿರ್ವಹಿಸುವವರಿಗೆ ಪ್ರತಿಭೆಯನ್ನು ಪ್ರದರ್ಶಿಸಲು ಅತ್ಯುತ್ತಮ ಅವಕಾಶಗಳಿವೆ. ಶುಭದಿನ: 15. ದೇವ್ಯಪರಾದ ಕ್ಷಮಾಪನಾ ಸ್ತೋತ್ರ ಪಠಿಸಿರಿ.




ಬಹಳ ಮುಖ್ಯವಾದ ಪಟ್ಟಿಯೊಂದನ್ನು ಸಿದ್ಧ ಮಾಡಿಕೊಳ್ಳುತ್ತೀರಿ. ಕೆಲವು ವಿಚಾರಗಳು ಕಣ್ತಪ್ಪಿನಿಂದ ಬಿಟ್ಟು ಹೋಗುವ ಸಾಧ್ಯತೆ ಇದೆ. ಈ ಅವಧಿಯಲ್ಲಿ ತಾಳ್ಮೆ ಮತ್ತು ಧೈರ್ಯ ಬಹಳ ಮುಖ್ಯ. ಸಮಯದ ಕೊರತೆ ವಿಪರೀತವಾಗಿ ಕಾಡುತ್ತದೆ. ವಾರದ ಮಧ್ಯ ಭಾಗದಲ್ಲಿ ವ್ಯಾಪಾರ ವಿಸ್ತರಣೆಗೆ ಶ್ರಮ ಹಾಕುತ್ತೀರಿ. ಆರೋಗ್ಯ ಉತ್ತಮವಾಗಿರುತ್ತದೆ. ಶುಭದಿನ: 16. ದುರ್ಗಾಪಾರಾಯಣ ಮಾಡಿರಿ.




ಆಸ್ತಿ ಖರೀದಿಗೆ ಪ್ರಯತ್ನಿಸುತ್ತಿರುವವರು ಸಂಬಂಧಪಟ್ಟ ಕಾಗದ ಪತ್ರಗಳನ್ನು ಕೂಲಂಕಷವಾಗಿ ಪರಿಶೀಲನೆ ನಡೆಸಲಿದ್ದೀರಿ. ದೊಡ್ಡ ಪ್ರಮಾದಗಳನ್ನು ತಡೆಯುವಂತೆ ಸನ್ನಿವೇಶಗಳು ನಿಮಗೆ ಪೂರಕ ಆಗಲಿವೆ. ಸಂಬಂಧದಲ್ಲಿ ಕೆಲವು ಕಹಿ ಬೆಳವಣಿಗೆಗಳು ಆಗಲಿವೆ. ವಾರದ ಅಂತ್ಯಕ್ಕೆ ಕುಟುಂಬದವರ ಬೆಂಬಲ ದೊರೆಯಲಿದೆ. ಶಿಕ್ಷಣದಲ್ಲಿ ಅತ್ಯುತ್ತಮ ಪ್ರಗತಿ ಇದೆ. ಶುಭದಿನ: 12. ವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ವಾರದ ಶುರುವಿನಲ್ಲೇ ವ್ಯಾಪಾರ ಉದ್ಯಮದಲ್ಲಿ ಪ್ರಗತಿ. ಇದರಿಂದ ಆತ್ಮವಿಶ್ವಾಸ ಹೆಚ್ಚಾಗುತ್ತದೆ. ಪ್ರತಿಷ್ಠಿತ ಸಂಸ್ಥೆಯೊಂದರ ಜತೆಗೆ ಮಹತ್ವದ ಒಪ್ಪಂದವೊಂದಕ್ಕೆ ಸಹಿ ಹಾಕುವ ಸಾಧ್ಯತೆ. ವೈವಾಹಿಕ ಜೀವನ ಸಂತೋಷದಾಯಕವಾಗಿ ಇರುತ್ತದೆ. ಉದ್ಯೋಗ ನಿಮಿತ್ತವಾಗಿ ಪ್ರಯಾಣ ಮಾಡಬೇಕಾಗುತ್ತದೆ. ತಾಂತ್ರಿಕ ಜ್ಞಾನ ಹೆಚ್ಚಿಸಿಕೊಳ್ಳುವ ಅವಕಾಶ ದೊರೆಯುತ್ತದೆ. ಶುಭದಿನ: 17. ಕಾಲಭೈರವನ ಸೇವೆ ಮಾಡಿರಿ.




ವಾರದ ಶುರುವಿನಲ್ಲಿ ಹಣದ ಸದುಪಯೋಗ ಮಾಡಿಕೊಳ್ಳುವ ಬಗ್ಗೆ ಯೋಜನೆ ರೂಪಿಸಲಿದ್ದೀರಿ. ಲಾಭ ಪಡೆಯಲು ಉತ್ತಮ ಅವಕಾಶಗಳಿವೆ. ನಿಮ್ಮ ಗುರಿಯನ್ನು ಅಂದುಕೊಂಡ ಸಮಯಕ್ಕಿಂತ ಮುಂಚಿತವಾಗಿಯೇ ತಲುಪುವ ಎಲ್ಲ ಸಾಧ್ಯತೆಗಳಿವೆ. ನನಗೆ ತಿಳಿದಿದ್ದೇ ಸತ್ಯ ಎಂಬ ಹಟಮಾರಿತನ ಒಳ್ಳೆಯದಲ್ಲ. ಭೂಮಿ ಖರೀದಿ ಮಾಡುವ ಸಾಧ್ಯತೆಗಳಿವೆ. ಶುಭದಿನ: 16. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ವಾರದ ಆರಂಭದಲ್ಲಿ ಉನ್ನತ ಶಿಕ್ಷಣದಲ್ಲಿ ಯಶಸ್ಸು ದೊರೆಯುವ ಸಾಧ್ಯತೆ ಹೆಚ್ಚಿದೆ. ದೇವತಾ ಆರಾಧನೆಗೆ ನಿಮ್ಮ ಶ್ರಮ ಹಾಕುತ್ತೀರಿ. ಉದ್ಯೋಗ ಸ್ಥಳದಲ್ಲಿ ಭಾವನಾತ್ಮಕವಾಗಿ ಕೆಲವು ನಿರ್ಧಾರಗಳನ್ನು ತೆಗೆದುಕೊಳ್ಳಲಿದ್ದೀರಿ. ವೃತ್ತಿಪರ ಜೀವನದಲ್ಲಿ ಅತ್ಯುತ್ತಮವಾದ ಬೆಳವಣಿಗೆ ಇದೆ. ಆರೋಗ್ಯದಲ್ಲಿ ಆದಾಯ ಅನುಕೂಲಕರವಾಗಿ ಬರಲಿದೆ. ಶುಭದಿನ: 16. ಕನಕಧಾರಾ ಸ್ತೋತ್ರ ಪಠಣ ಮಾಡಿರಿ.